ಶ್ರೀ ಕೆ.ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು) :

ಅ) ಹೌದು. ರಾಜ್ಯದ ಸುಮಾರು 300 ಕಿ.ಮೀ. ಉದ್ದದ ಕರಾವಳಿ ತೀರದಲ್ಲಿ ಸುಮಾರು 73 ಕಿ.ಮೀ.ಗಳಷ್ಟು ಉದ್ದದ ಪ್ರದೇಶವು ತೀವ್ರ ಸಮುದ್ರ ಕೊರೆತದ ಪ್ರದೇಶವೆಂದು ಗುರುತಿಸಲಾಗಿದ್ದು. ಈ ಜಾಗದಲ್ಲಿ ತಡೆ ಗೋಡೆ ರಚಿಸಲು ರೂ.145 ಕೋಟಿಗಳ ಒಂದು ಮಾಸ್ಟರ್ ಪ್ಲಾನ್ ರಚಿಸಲಾಗಿದೆ.

ಆ) ಈ ಮಾಸ್ಟರ್ ಪ್ಲಾನನ್ನು ಅನುಮೋದನೆ ಹಾಗೂ ಆರ್ಥಿಕ ನೆರವಿಗಾಗಿ ಕೇಂದ್ರ ಜಲ ಆಯೋಗಕ್ಕೆ ದಿನಾಂಕ 9-8-1989ರಲ್ಲಿ ಸಲ್ಲಿಸಲಾಗಿದೆ.

ಇ) ಯಾವ ಅನುದಾನವೂ ಬಂದಿರುವುದಿಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಇವೆ.

ಬೀದರ್ ಜಿಲ್ಲೆಯಲ್ಲಿ ಕ್ರೀಡೆಗಳ ಅಭಿವೃದ್ಧಿಗಾಗಿ ಕೈಗೊಂಡ ಕ್ರಮಗಳು

297 (1698) ಶ್ರೀ ಬಸವರಾಜ ಪಾಟೀಲ ಅಟ್ಟೂರ (ಬಸವಕಲ್ಯಾಣ) : ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಪ್ರಸ್ತುತ ವರ್ಷ ಕ್ರೀಡಾ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

ಆ) ಬೀದರ್ ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕುಗಳಲ್ಲಿ ಸ್ಟೇಡಿಯಂಗಳನ್ನು ಮಂಜೂರು ಮಾಡಲಾಗಿದೆ ;

ಇ) ಇದಕ್ಕೆ ತಗುಲಿದ ವೆಚ್ಚವೆಷ್ಟು? (ಪ್ರತ್ಯೇಕ ವಿವರ ನೀಡುವುದು)

ಶ್ರೀ ಎಸ್. ರಮೇಶ್ (ಯುವಜನ ಸೇವಾ ಮತ್ತು ಕ್ರೀಡಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) :

ಅ) ಬೀದರ್ ಜಿಲ್ಲಾಕ್ರೀಡಾಂಗಣ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಿ. ಕಾರ್ಯವು ಪ್ರಗತಿಯಲ್ಲಿದೆ. ಬೀದರ್ ಜಿಲ್ಲೆಯಲ್ಲಿ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಕ್ರೀಡಾಂಗಣಗಳನ್ನು ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ. ಕ್ರೀಡಾ ಅಭಿವೃದ್ಧಿಗಾಗಿ ಫುಟಬಾಲ್ ಮತ್ತು ಹಾಕಿ ತರಬೇತುದಾರರನ್ನು ನೇಮಿಸಲಾಗಿದೆ. ಮತ್ತು ಬೀದರ್‌ನಲ್ಲಿ ರಾಜ್ಯ ಮಟ್ಟದ ವಾಲಿಬಾಲ್ ಪಂದ್ಯಾವಳಿಯನ್ನು ನಡೆಸಲಾಗಿದೆ.ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಗ್ರಾಮೀಣ. ಮಹಿಳಾ ಮತ್ತು ದಸರಾ ಕ್ರೀಡಾಕೂಟವನ್ನು ನಡೆಸಲಾಗಿದೆ.

ಆ) ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿ ಯೋಜನೆಯ ಆಶ್ರಯದಲ್ಲಿ ಬೀದರ್ ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಕ್ರೀಡಾಂಗಣ ನಿರ್ಮಿಸಲು ಯೋಜಿಸಲಾಗಿದೆ.

ಇ) ಪ್ರತಿ ತಾಲ್ಲೂಕು ಕ್ರೀಡಾಂಗಣದ ಅಂದಾಜು ವೆಚ್ಚ ರೂ. 15.75ಲಕ್ಷಗಳು.